**All India Radio: Bangalore**
**Regional Bulletin In Kannada**
**04.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಭೂಸ್ವಾಧೀನ ವಿಷಯವಾಗಿ ದೇವನಹಳ್ಳಿ ತಾಲೂಕಿನ ರೈತ ಮುಖಂಡರೊಂದಿಗೆ ಮುಖ್ಯಮಂತ್ರಿ ಚರ್ಚೆ
2. ಆಷಾಡ ಮಾಸದ ೨ನೇ ಶುಕ್ರವಾರ ಹಿನ್ನೆಲೆಯಲ್ಲಿ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಹರಿದು ಬಂದ ಭಕ್ತಸಾಗರ
3. ತುಂಗಾಭದ್ರ ಜಲಾಶಯದಲ್ಲಿ ; ಈ ಬಾರಿ ೮೦ ಟಿಎಂಸಿ ನೀರು ಮಾತ್ರ ಸಂಗ್ರಹಿಸಲು ಮಂಡಳಿ ನಿರ್ಧಾರ
4. ಶೃಂಗೇರಿಯಲ್ಲಿ ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ತುಂಗಾ ನದಿ ; ಗಾಂಧಿ ಮೈದಾನಕ್ಕೆ ನುಗ್ಗಿದ ನದಿ ನೀರು

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಭೂಸ್ವಾಧೀನ ವಿಷಯವಾಗಿ ದೇವನಹಳ್ಳಿ ತಾಲೂಕು ಚನ್ನರಾಯಪಟ್ಟಣದ ರೈತ ಹೋರಾಟಗಾರರು, ಸ್ಥಳೀಯ ಮುಖಂಡರ ಜೊತೆ ಚರ್ಚೆ ನಡೆಸಿದರು. ಈ ವೇಳೆ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಪೊನ್ನಣ್ಣ, ಆಹಾರ ಸಚಿವ ಕೆ.ಎಚ್.ಮುನಿಯಪ್ಪ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಶಾಸಕ ಬಿ.ಆರ್.ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು.

<><><><>

ಆಷಾಢ ಮಾಸದ ಹಿನ್ನೆಲೆಯಲ್ಲಿ ೨ನೇ ಶುಕ್ರವಾರವೂ ಮೈಸೂರಿನ ಚಾಮುಂಡಿಬೆಟ್ಟಕ್ಕೆ ಭಕ್ತ ಸಾಗರವೇ ಹರಿದುಬರುತ್ತಿದೆ. ಮುಂಜಾನೆಯಿಂದಲೇ ನಾಡ ಅಧಿದೇವತೆ ಚಾಮುಂಡಿ ದರ್ಶನ್ನಕೆ ಭಕ್ತರು ಆಗಮಿಸುತ್ತಿದ್ದಾರೆ. ಆಷಾಢ ಮಾಸದ ಶುಕ್ರವಾರದಂದು ದೇವಿಯ ದರ್ಶನ ಪಡೆದರೆ ಸಹಸ್ರ ಪುಣ್ಯದ ಫಲ ದೊರೆಯಲಿದೆ ಎಂಬ ಪ್ರತೀತಿ ಇದೆ. ಇದೇ ಕಾರಣದಿಂದ ಸಾವಿರಾರು ಜನರು ಚಾಮುಂಡಿಬೆಟ್ಟಕ್ಕೆ ಆಗಮಿಸುತ್ತಾರೆ. ಅಲ್ಲದೇ ಭಕ್ತರು ವಿವಿಧ ಸೇವೆ ಹಾಗೂ ಪೂಜೆಗಳನ್ನು

ನೆರವೇರಿಸುತ್ತಿದ್ದಾರೆ. ಆಷಾಢ ಮಾಸದ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ವಿವಿಧ ಹೂವು-ಹಣ್ಣುಗಳಿಂದ ಅಲಂಕಾರ ಮಾಡಲಾಗಿದ್ದು, ಇಂದು ಮುಂಜಾನೆಯಿಂದಲೇ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಮುಂಜಾನೆಯಿಂದಲೇ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ಮಹಾಮಂಗಳಾರತಿ ಹಾಗೂ ವಿವಿಧ ಪೂಜಾ ಕೈಂಕರ್ಯಗಳು ನೆರವೇರುತ್ತಿವೆ. ಇನ್ನು ಚಾಮುಂಡಿಬೆಟ್ಟಕ್ಕೆ ತೆರಳುವ ಭಕ್ತರಿಗೆ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದ್ದು, ಉಚಿತ ದರ್ಶನ, ೩೦೦ ರೂಪಾಯಿ ದರ್ಶನ ಹಾಗೂ ೨ ಸಾವಿರ ರೂಪಾಯಿ ದರ್ಶನಕ್ಕೆ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, ಭಕ್ತರಿಗೆ ಮೂಲಸೌಕರ್ಯ ಕಲ್ಪಿಸಲಾಗಿದೆ.

<><><><>

ತೆಂಗು ಬೆಳೆ ಬಾಧಿಸುವ ಕೀಟಗಳನ್ನು ಹತೋಟಿಗೆ ತರಲು ಕ್ರಮವಹಿಸುವುದಾಗಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಸಿ.ಪಿ.ಯೋಗೇಶ್ವರ್ ತಿಳಿಸಿದ್ದಾರೆ. ರಾಮನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕಾಸರಗೋಡು ತೆಂಗು ಬೆಳೆ ಉತ್ಪಾದನೆಯ ಸಂಶೋಧನಾ ವಿಭಾಗ ಹಾಗೂ ಜಿಲ್ಲಾ ತೋಟಗಾರಿಕೆ ಇಲಾಖೆ ವತಿಯಿಂದ ತೆಂಗಿನಲ್ಲಿ ಕಪ್ಪು ತಲೆ ಹುಳು, ಬಿಳಿ ನೊಣದ ನಿಯಂತ್ರಣ ಹಾಗೂ ತೆಂಗು ಬೆಳೆಯ ಅಭಿವೃದ್ಧಿ ಕುರಿತು ವಿಜ್ಞಾನಿಗಳ ತಂಡದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತೆಂಗಿಗೆ ರೋಗಬಾಧೆ ಎಲ್ಲಾ ಕಡೆಯು ಇದ್ದು, ಇದರ ಬಗ್ಗೆ ಅರಿವು ಮೂಡಿಸಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಲಾಗುವುದು. ಜಿಲ್ಲೆಯಲ್ಲಿ ತೆಂಗು ಬೆಳೆ ಅಭಿವೃದ್ಧಿಗಾಗಿ ರೈತರು ಆರ್ಥಿಕವಾಗಿ ಶಕ್ತರಾಗಬೇಕು. ನೀರಾ ಉತ್ಪಾದನೆಯನ್ನು ಹೆಚ್ಚಿಸುವ ದೃಷ್ಟಿಯಿಂದ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. ಚನ್ನಪಟ್ಟಣದ ತಿಟ್ಟಮಾರನಹಳ್ಳಿಯಲ್ಲಿ ಪ್ಲಾಂಟೆಷನ್ ಮಾಡಲು ಕ್ರಮವಹಿಸಲಾಗಿದೆ. ಇದರಿಂದ ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗಲಿದೆ ಎಂದು ಶಾಸಕ ಸಿ.ಪಿ.ಯೋಗೇಶ್ವರ್ ತಿಳಿಸಿದರು.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತೆ ವಿಭಾಗದ ಅಂಕಿತಾಧಿಕಾರಿ ಹಾಗೂ ಆಹಾರ ಸುರಕ್ಷತಾಧಿಕಾರಿಗಳು, ಜಿಲ್ಲೆಯ ದೇವನಹಳ್ಳಿ, ಹೊಸಕೋಟೆ, ನೆಲಮಂಗಲ, ದೊಡ್ಡಬಳ್ಳಾಪುರದಲ್ಲಿ ಇರುವ ಒಟ್ಟು ೨೩ ಹೋಟೆಲ್ ಹಾಗೂ ರೆಸ್ಟೋರೆಂಟ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ನಿಯಮ ಉಲ್ಲಂಘಿಸಿರುವ ಉದ್ದಿಮೆದಾರರಿಗೆ ನೋಟಿಸ್ ನೀಡಿ, ೧೦ ಸಾವಿರ ರೂಪಾಯಿ ದಂಡ ವಿಧಿಸಲಾಗಿದೆ. ಕುಡಿಯುವ ನೀರಿನ ನಾಲ್ಕು ಮಾದರಿಯನ್ನು ಸಂಗ್ರಹಿಸಿ, ಪರೀಕ್ಷೆಗೆ

ಒಳಪಡಿಸಲಾಗಿದೆ. ಆಹಾರ ಉದ್ದಿಮೆ ಸ್ಥಳದಲ್ಲಿ ಪರಿಸರ ನೈರ್ಮಲ್ಯವಾಗಿರಬೇಕು, ವೈಯಕ್ತಿಕ ಶುಚಿತ್ವ ಕಾಪಾಡಿಕೊಳ್ಳಬೇಕು, ಕುಡಿಯುವ ನೀರಿನ ಪರಿಶೀಲನೆ ಮಾಡಿ, ಗ್ರಾಹಕರಿಗೆ ಶುದ್ಧ ಕುಡಿಯುವ ನೀರು ನೀಡಬೇಕೆಂದು ಸೂಚಿಸಲಾಗಿದೆ. ಅಲ್ಲದೇ, ಆಹಾರ ಉದ್ದಿಮೆದಾರರಿಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ಆಹಾರ ಸುರಕ್ಷತೆಯ ಅಂಕಿತಾಧಿಕಾರಿ ಡಾ. ಧರ್ಮೇಂದ್ರ ಬಿ. ತಿಳಿಸಿದ್ದಾರೆ.

<><><><>

ಕೊಪ್ಪಳ ಜಿಲ್ಲೆಯ ಮುನಿರಾಬಾದ ಗ್ರಾಮದಲ್ಲಿನ ತುಂಗಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ ೭೮.೧೩ ಟಿಎಂಸಿ ಅಡಿ ತಲುಪಿದ್ದು, ೧೦ ಕ್ರೆಸ್ಟ್‌ಗೇಟ್‌ಗಳನ್ನು ತೆರೆದು, ೬೧ ಸಾವಿರದ ೭೬೬ ಕ್ಯೂಸೆಕ್‌ನಷ್ಟು ನೀರನ್ನು ನದಿ ಮತ್ತು ಕಾಲುವೆಗಳಿಗೆ ಹರಿಸಲಾಯಿತು. ಇದರಿಂದ ಹಂಪಿಯಲ್ಲಿ ಪುರಂದರ ಮಂಟಪ ಬಹುತೇಕ ಮುಳುಗಡೆಯಾಗಿದೆ. ಹುಲಿಗೆಮ್ಮ ದೇವಸ್ಥಾನ ಮತ್ತು ಶಿವಪುರ ಮಾರ್ಕಂಡೇಶ್ವರ ದೇವಸ್ಥಾನದ ಮುಂಬಾಗದಲ್ಲಿ ನೀರು ಸಮೀಪಿಸುವ ಸಾಧ್ಯತೆ ಇದೆ. ೧೦೫.೭೮ ಟಿಎಂಸಿ ಅಡಿ ಸಂಗ್ರಹ ಸಾಮರ್ಥ್ಯದ ತುಂಗಭದ್ರಾ ಜಲಾಶಯದಲ್ಲಿ ಅಣೆಕಟ್ಟೆಯ ಸುರಕ್ಷತೆ ದೃಷ್ಟಿಯಿಂದ ಈ ಬಾರಿ ೮೦ ಟಿಎಂಸಿ ಅಡಿಯಷ್ಟು ನೀರನ್ನು ಮಾತ್ರ ಸಂಗ್ರಹಿಸಿ ಇಡಲು ತುಂಗಭದ್ರಾ ಮಂಡಳಿ ನಿರ್ಧರಿಸಿದೆ. ಇನ್ನಷ್ಟು ಗೇಟ್‌ಗಳನ್ನು ತೆರೆದು, ನೀರು ಹೊರಬಿಡುವ ಸಾಧ್ಯತೆ ಇದೆ. ನದಿ ದಂಡೆಯ ಜನರು ಎಚ್ಚರದಿಂದ ಇರಬೇಕು ಎಂದು ಮಂಡಳಿ ಎಚ್ಚರಿಕೆ ನೀಡಿದೆ. ಕಳೆದ ವರ್ಷ ಜುಲೈ ೩ನೇ ವಾರ ಜಲಾಶಯ ಬಹುತೇಕ ಭರ್ತಿಯಾಗಿತ್ತು. ಆಗ ಕ್ರೆಸ್ಟ್‌ಗೇಟ್‌ಗಳನ್ನು ಹಂತ-ಹಂತವಾಗಿ ತೆರೆದು ಹೆಚ್ಚುವರಿ ನೀರನ್ನು ಹೊರಗೆ ಬಿಡಲಾಗಿತ್ತು. ಆದರೆ, ಕ್ರೆಸ್ಟ್‌ಗೇಟ್‌ಗಳು ಶಿಥಿಲಗೊಂಡಿವೆ.ಅವುಗಳನ್ನು ಬದಲಿಸುವಂತೆ ತಜ್ಞರು ವರದಿ ನೀಡಿದ ಕಾರಣ ಈ ಬಾರಿ ಗರಿಷ್ಠ ಮಟ್ಟದಲ್ಲಿ ನೀರು ಸಂಗ್ರಹಿಸದಿರಲು ನಿರ್ಧರಿಸಲಾಗಿದೆ. ಹೀಗಾಗಿ ೧೦ ಕ್ರೆಸ್ಟ್‌ಗೇಟ್‌ಗಳನ್ನು ತಲಾ ೧.೫ ಅಡಿಯಷ್ಟು ಎತ್ತಿ ನೀರು ಹೊರಬಿಡಲಾಗುತ್ತಿದೆ ಎಂದು ತುಂಗಭದ್ರಾ ಮಂಡಳಿಯ ಸುಪರಿಂಡೆಂಟ್ ಎಂಜಿಯರ್ ನಾರಾಯಣ ನಾಯಕ ತಿಳಿಸಿದ್ದಾರೆ. ತುಂಗಭದ್ರಾ ಜಲಾಶಯಕ್ಕೆ ೧೧ ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ೩ ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹೊನ್ನಾಳಿ, ದಾವಣಗೆರೆ, ಹರಿಹರ, ಹರಪನಹಳ್ಳಿ ತಾಲೂಕಿನ ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

<><><><>

ಕಾಳಿನದಿ ಯೋಜನೆ ಎರಡನೇ ಹಂತ ಕದ್ರಾ ಅಣೆಕಟ್ಟೆಯ ಜಲಾನಯನ ಪ್ರದೇಶದಲ್ಲಿ ಮುಂಗಾರು ಪ್ರಾರಂಭವಾಗಿದ್ದು, ಜಲಾಶಯದ ಒಳ ಹರಿವಿನ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ಕದ್ರಾ ಜಲಾಶಯದ ಗರಿಷ್ಠ ಮಟ್ಟವು ೩೪.೫೦ ಮೀಟರ್ ಗಳಾಗಿದ್ದು, ಪ್ರಸ್ತುತ ಜಲಾಶಯದ ಮಟ್ಟವು ೩೦ ಮೀಟರ್ ತಲುಪಿದೆ. ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ ೨೩ ಸಾವಿರ ೧೮೨ ಕ್ಯೂಸೆಕ್ಸ್ ಆಗಿದೆ. ಈ ಕಾರಣ ಕದ್ರಾ ಅಣೆಕಟ್ಟಿನ ಕೆಳಭಾಗದಲ್ಲಿ ವಾಸಿಸುತ್ತಿರುವ ಸಾರ್ವಜನಿಕರು ಜಲಾಶಯದ ಮಟ್ಟ ಏರಿಕೆಯಾದಾಗಲೆಲ್ಲ ಯಾವುದೇ ಸಮಯದಲ್ಲಿ ನೀರನ್ನು ಹೊರ ಬಿಡಲಾಗುವುದು. ಆದ್ದರಿಂದ ಸಾರ್ವಜನಿಕರ ಸುರಕ್ಷತಾ ಹಿತದೃಷ್ಟಿಯಿಂದ ಅಣೆಕಟ್ಟಿನ ಕೆಳಭಾಗದಲ್ಲಿ ವಾಸಿಸುತ್ತಿರುವ ಜನರು ಸುರಕ್ಷಿತ ಸ್ಥಳಕ್ಕೆ ತೆರಳಲು ಹಾಗೂ ಪ್ರಾಣಿಗಳನ್ನು ಸುರಕ್ಷಿತ ಪ್ರದೇಶಕ್ಕೆ ಸಾಗಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಹಾಗೂ ದೋಣಿ ಸಂಚಾರ, ಮೀನುಗಾರಿಕೆ ಮತ್ತು ಇತರೆ ಚಟುವಟಿಕೆಗಳನ್ನು ನಡೆಸದಂತೆ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗದಲ್ಲಿ ಹೆಚ್ಚಿನ ಮಳೆಯಾಗುತ್ತಿದೆ. ಹೆಚ್ಚು ಮಳೆ ಹಿನ್ನಲೆಯಲ್ಲಿ ಶೃಂಗೇರಿಯಲ್ಲಿ ತುಂಗಾ ನದಿಯು ಅಪಾಯದ ಮಟ್ಟವನ್ನು ಮೀರಿ ಹರಿಯುತ್ತಿದ್ದು, ಗಾಂಧಿ ಮೈಧಾನಕ್ಕೆ ನದಿಯ ನೀರು ನುಗ್ಗಿದೆ. ಮುಂಜಾಗ್ರತ ಕ್ರಮವಾಗಿ ಗಾಂಧಿ ಮೈದಾನಕ್ಕೆ ಸಾರ್ವಜನಿಕರ ತೆರಳದಂತೆ ಪೊಲೀಸರು ಬ್ಯಾರಿಕೇಡ್ ಅಳವಡಿಸಿದಾರೆ. ಸತತ ಮಳೆ ಪರಿಣಾಮ ಜಿಲ್ಲೆಯ ಕೊಪ್ಪ, ಶೃಂಗೇರಿ, ಚಿಕ್ಕಮಗಳೂರು ತಾಲೂಕಿನ ಕೆಲವೆಡೆ ವಿದ್ಯುತ್ ಕಂಬಗಳಿಗೆ ಹಾನಿಯಾಗಿದ್ದು, ಹಲವು ಗ್ರಾಮಗಳಲ್ಲಿ ವಿದ್ಯುತ್ ಸಮಸ್ಯೆ ಉಂಟಾಗಿದೆ. ಇಂದು ಹೆಚ್ಚು ಮಳೆಯ ಕಾರಣ ಜಿಲ್ಲೆಯ ಚಿಕ್ಕಮಗಳೂರು, ಮೂಡಿಗೆರೆ, ಕಳಸ, ಶೃಂಗೇರಿ, ಕೊಪ್ಪ, ಎನ್.ಆರ್ ಪುರ ತಾಲೂಕುಗಳ ಅಂಗನವಾಡಿ ಕೇಂದ್ರಗಳು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಜಿಲ್ಲಾಡಳಿತ ರಜೆ ಘೋಷಣೆ ಮಾಡಿದೆ. ಉತ್ತರ ಕನ್ನಡ ಜಿಲ್ಲೆಯ ಮಲೆನಾಡು ತಾಲೂಕುಗಳಲ್ಲಿ ನಿನ್ನೆಯಿಂದ ಧಾರಾಕಾರ ಮಳೆ ಸುರಿಯುತ್ತಿದೆ. ಮಕ್ಕಳ ಸುರಕ್ಷತೆಯ ದೃಷ್ಠಿಯಿಂದ ಶಿರಸಿ, ಸಿದ್ಧಾಪುರ, ಯಲ್ಲಾಪುರ ಹಾಗೂ ಜೋಯಿಡಾ ತಾಲುಕುಗಳ ಶಾಲೆಗಳಿಗೆ ಇಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ರಜೆ ಘೋಷಿಸಿದ್ದಾರೆ. ದಾವಣಗೆರೆ ಜಿಲ್ಲಾದ್ಯಂತ ಇಂದೂ ಕೂಡ ಮಳೆ ಮುಂದುವರಿದಿದ್ದು, ತುಂಗಭದ್ರಾ ನದಿಯ ನೀರಿನ ಮಟ್ಟದಲ್ಲಿ ಏರಿಕೆ ಕಂಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>